# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 594 ಗ್ರಾಪಂಅ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:30-05-2017

## ಸುತ್ತೋಲೆ

**ವಿಷಯ:** ರಾಜ್ಯದ ಗ್ರಾಮ ಪಂಚಾಯಿತಿಗಳು ಕಸ ವಿಲೇವಾರಿಗೆ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ.

********

ಗ್ರಾಮ ಪಂಚಾಯಿತಿಗಳು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58 ರನ್ವಯ ಗ್ರಾಮ ಪಂಚಾಯಿತಿ ಕೈಗೊಳ್ಳಬೇಕಾದ ಪ್ರಕಾರ್ಯಗಳನ್ನು ಅನುಸೂಚಿ-I ರಲ್ಲಿ ವಿವರಿಸಲಾಗಿದೆ. ಅನುಸೂಚಿ-I ರ ಕ್ರಮ ಸಂಖ್ಯೆ: 20 ರಲ್ಲಿ ಗ್ರಾಮ ಪಂಚಾಯಿತಿಗಳು ಕೈಗೊಳ್ಳಬೇಕಾದ ನೈರ್ಮಲ್ಯ ಕಾರ್ಯಕ್ರಮಗಳ ವಿವರ ಈ ಕೆಳಕಂಡಂತೆ ನೀಡಲಾಗಿದೆ. ಈ ಕಾರ್ಯಕ್ರಮಗಳು ಗ್ರಾಮ ಪಂಚಾಯಿತಿಗಳ ಪ್ರಾಥಮಿಕ ಕರ್ತವ್ಯಗಳಾಗಿರುತ್ತವೆ.

1) ಸಾರ್ವಜನಿಕ ರಸ್ತೆಗಳು, ಚರಂಡಿಗಳು, ಸ್ನಾನ ಘಟ್ಟದ ಕೊಳಗಳು, ಬಾವಿಗಳು, ಕೊಳಗಳು ಮತ್ತು ಇತರ ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛವಾಗಿರಿಸಿಕೊಳ್ಳುವುದು ಹಾಗೂ ಸಂರಕ್ಷಿಸುವುದು.
2) ದ್ರವ ತ್ಯಾಜ್ಯ ನಿರ್ವಹಣಾ ವ್ಯವಸ್ಥೆಯನ್ನು ಸ್ಥಾಪಿಸುವುದು ಮತ್ತು ಅದನ್ನು ನಿರ್ವಹಿಸುವುದು.
3) ಬಹು ಗ್ರಾಮ ಘನ ತ್ಯಾಜ್ಯ ನಿರ್ವಹಣಾ ಸ್ಥಾವರಗಳಿಗೆ ಘನ ತ್ಯಾಜ್ಯವನ್ನು ಸಂಗ್ರಹಿಸುವುದು, ಬೇರ್ಪಡಿಸುವುದು ಮತ್ತು ರವಾನಿಸುವುದು.
4) ವಾಸ ಸ್ಥಳಗಳು, ಸಾರ್ವಜನಿಕ ಸ್ಥಳಗಳು ಮತ್ತು ಎಲ್ಲಾ ಸ್ಥಳೀಯ ಸಂಸ್ಥೆಗಳನ್ನೊಳಗೊಂಡಂತೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿನ ನೈರ್ಮಲ್ಯ ಕಾರ್ಯಕ್ರಮವನ್ನು ಯೋಜಿಸುವುದು ಮತ್ತು ಅದನ್ನು ಅನುಷ್ಠಾನಗೊಳಿಸುವುದು.
5) ಆರೋಗ್ಯ ಮತ್ತು ನೈರ್ಮಲ್ಯ ನೀತಿಯನ್ನು ಅಭಿವೃದ್ಧಿಪಡಿಸುವುದು ಮತ್ತು ಅದನ್ನು ಅನುಷ್ಠಾನಗೊಳಿಸುವುದು.
6) ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನೈರ್ಮಲ್ಯ ಮತ್ತು ತ್ಯಾಜ್ಯ ನಿರ್ವಹಣಾ ಕಾರ್ಯಕ್ರಮಗಳ ಅನುಷ್ಠಾನ.

ಆದರೆ ಬಹಳಷ್ಟು ಗ್ರಾಮ ಪಂಚಾಯಿತಿಗಳಲ್ಲಿ ತಮ್ಮ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಘನ ಹಾಗೂ ದ್ರವ ತ್ಯಾಜ್ಯವನ್ನು ವಿಲೇ ಮಾಡದೆ ರಸ್ತೆಗಳು, ಸಾರ್ವಜನಿಕ ಸ್ಥಳಗಳು, ಕುಡಿಯುವ ನೀರಿನ ಮೂಲಗಳಾದ ಕೆರೆ, ಕಾಲುವೆಗಳು, ನದಿ ಪಾತ್ರಗಳು ಹಾಗೂ ಸಮುದ್ರ ತೀರಗಳಲ್ಲಿ ಸುರಿದು ಅನೈರ್ಮಲ್ಯಗೊಳಿಸುವುದಲ್ಲದೆ ಕೆರೆ, ಕಾಲುವೆ, ನದಿ ಹಾಗೂ ಸಮುದ್ರದ ನೀರು ಕಲುಷಿತಗೊಳ್ಳಲು ಹಾಗೂ ತನ್ಮೂಲಕ ಪರಿಸರಕ್ಕೆ ಹಾನಿಯುಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ವಿಷಯವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ.

ಗ್ರಾಮ ಪಂಚಾಯಿತಿಗಳು ಸ್ವಚ್ಛ ಪರಿಸರ ಕಾಪಾಡುವ ದೃಷ್ಟಿಯಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರಲ್ಲಿ ತಿಳಿಸಿರುವಂತೆ ಕ್ರಮ ಕೈಗೊಂಡು ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಸ ವಿಲೇವಾರಿಗೆ ಪ್ರತ್ಯೇಕ ಸ್ಥಳ ವ್ಯವಸ್ಥೆ ಮಾಡಿ ಕಸವನ್ನು ಸಂಸ್ಕರಿಸಿ ವಿಲೇ ಮಾಡಲು ಕ್ರಮಕೈಗೊಳ್ಳುವಂತೆ ಸೂಚಿಸಿದೆ ಹಾಗೂ 2-3 ಗ್ರಾಮ ಪಂಚಾಯಿತಿಗಳು ಒಟ್ಟುಗೂಡಿ ಬಹು ಗ್ರಾಮ ಘನ ತ್ಯಾಜ್ಯ ನಿರ್ವಹಣಾ ಸ್ಥಾವರಗಳನ್ನು ನಿರ್ಮಿಸಿಕೊಂಡು, ಕಸವನ್ನು ಬೇರ್ಪಡಿಸಿ, ಸಂಸ್ಕರಿಸಿ ವಿಲೇ ಮಾಡಲು ಕ್ರಮಕೈಗೊಳ್ಳಲು ತಿಳಿಸಿದೆ.

ಮೇಲೆ ವಿವರಿಸಿದಂತೆ **ಗ್ರಾಮ ಪಂಚಾಯಿತಿಗಳು ಸ್ವಚ್ಛ ಪರಿಸರವನ್ನು ಕಾಪಾಡುವಲ್ಲಿ ವಿಫಲರಾದಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 268 ರನ್ವಯ ಕ್ರಮ ಕೈಗೊಳ್ಳಲಾಗುವುದು.**

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1) ಆಯುಕ್ತರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಬೆಂಗಳೂರು.
2) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
4) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
5) ಶಾಖಾ ರಕ್ಷಾ ಕಡತ./ ಹೆಚ್ಚುವರಿ ಪ್ರತಿ.